# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದಲ್ಲಿ ಅಳವಡಿಸಿಕೊಳ್ಳಲು ಉದ್ದೇಶಿಸಿರುವ GIS ಆಧಾರಿತ ಪ್ರಸ್ತಾಪಿತ ರಸ್ತೆ ಪರಿಚಲನಾ ಜಾಲದ ನಕ್ಷೆಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರಡಿಯಲ್ಲಿ ಸರ್ಕಾರದಿಂದ ತಾತ್ಕಾಲಿಕ ಅನುಮೋದನೆ ನೀಡುವ ಕುರಿತು.

ಉಲ್ಲೇಖ:
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ:21-11-2025, ದಿನಾಂಕ:13-01-2026 ಮತ್ತು ದಿನಾಂಕ:22-04-2026 ರಂದು ನಡೆದ ಸಭೆಯ ನಡವಳಿಗಳು.
2. ಸರ್ಕಾರದ ಆದೇಶ ಸಂಖ್ಯೆ:UDD 540 ಬೆಂಆಸೇ 2004, ದಿ:25.06.2007
3. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ:ಬೆಂಅಪ್ರಾ/ನಯೋಸೇ/ಇ 277808/ 2026-27.2131, ದಿ:07.09.2026.

********

## ಪ್ರಸ್ತಾವನೆ

ಮೇಲೆ ಓದಲಾದ ಉಲ್ಲೇಖ (1) ರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಗಳಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಸ್ಥಳೀಯ ಯೋಜನಾ ಪ್ರದೇಶದಲ್ಲಿ ಹಾಲಿ ಬೆಳವಣಿಗೆಗಳನ್ನು ಗಮನದಲ್ಲಿರಿಸಿಕೊಂಡು ರಸ್ತೆ ಪರಿಚಲನೆಯನ್ನು (Road network) ಸಿದ್ಧಪಡಿಸಿ ಆದ್ಯತೆ ಮೇರೆಗೆ ಸರ್ಕಾರದ ಅನುಮೋದನೆಗೆ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ.

ಮೇಲೆ ಓದಲಾದ ಉಲ್ಲೇಖ (2) ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರಡಿ ಬೆಂಗಳೂರು ಸ್ಥಳೀಯ ಯೋಜನಾ ಪ್ರದೇಶದ ಪರಿಷ್ಕೃತ ಮಹಾಯೋಜನೆ-2015 (RMP-2015) ಗೆ ಅಂತಿಮ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಉಲ್ಲೇಖ (3) ರಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸರ್ಕಾರದಿಂದ ಈಗಾಗಲೇ ಅನುಮೋದಿಸಲ್ಪಟ್ಟು ಜಾರಿಯಲ್ಲಿರುವ ಮಹಾಯೋಜನೆಯಲ್ಲಿ ನಗರೀಕರಣದ ಎಲ್ಲೆಯಲ್ಲಿ ಬಹುತೇಕ ರಸ್ತೆಗಳನ್ನು ಪ್ರಸ್ತಾಪಿಸಲಾಗಿದ್ದು, ನಗರೀಕರಣದ ಎಲ್ಲೆಯ ಹೊರಭಾಗದ ಕೃಷಿ / ವ್ಯವಸಾಯ ವಲಯದಲ್ಲಿ ಸೂಕ್ತ ರಸ್ತೆ ಪರಿಚಲನಾ ಜಾಲವನ್ನು ಅಳವಡಿಸುವುದರಿಂದ ಪ್ರಾದೇಶಿಕ ಯೋಜನೆ ಮತ್ತು ಅಭಿವೃದ್ಧಿಗೆ ಸಹಕಾರಿಯಾಗುತ್ತದೆ ಮತ್ತು ಸದರಿ ಸಂಪರ್ಕ ಜಾಲವು ಸಮತೋಲನಾ ಅಭಿವೃದ್ಧಿಗೆ ಮಹತ್ವದ ಪಾತ್ರ ವಹಿಸುತ್ತದೆ ಎಂದು ವರದಿ ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ಗಡಿಯವರೆಗೆ ಸಂಪರ್ಕ ಕಲ್ಪಿಸುವ ರಸ್ತೆ ಜಾಲವನ್ನು ಮಹಾಯೋಜನೆಯಲ್ಲಿ ಅಳವಡಿಸುವುದು ಅವಶ್ಯವಾಗಿರುವುದರಿಂದ ಲೋಕೋಪಯೋಗಿ ಇಲಾಖೆಯಿಂದ ಅಧಿಸೂಚಿಸಲಾದ ರಸ್ತೆಗಳ ಪಂಕ್ತೀಕರಣದಂತೆ ಯೋಜನಾಬದ್ಧವಾಗಿ ಸ್ಥಳೀಯ ಯೋಜನಾ ಪ್ರದೇಶದ ರಸ್ತೆಗಳನ್ನು ಪ್ರಸ್ತಾಪಿಸಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 12(1)(ಬಿ) ರನ್ವಯ ರಸ್ತೆ ಪರಿಚಲನಾ ಜಾಲದ ನಕ್ಷೆಗಳನ್ನು ತಯಾರಿಸಿದ್ದು, Karnataka General Clauses Act 1899 ರ ಕಲಂ 21 ರ ಅಡಿಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ13(1) ರನ್ವಯ ಅನುಮೋದನೆ ನೀಡುವ ಸಂಬಂಧ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುವುದಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪ್ರಸ್ತಾವನೆಯಲ್ಲಿ ವಿವರಿಸಲಾಗಿದೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 598 ಎಂಎನ್‌ಜೆ 2026,**
**ಬೆಂಗಳೂರು, ದಿನಾಂಕ:09.09.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ಗಡಿಯವರೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 12(1)(ಬಿ) ರನ್ವಯ ಅಳವಡಿಸಿಕೊಳ್ಳಲು ಪ್ರಸ್ತಾಪಿಸಲಾಗಿರುವ ರಸ್ತೆ ಪರಿಚಲನಾ ಜಾಲದ ನಕ್ಷೆಗಳನ್ನು ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 13(1) ರನ್ವಯ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

**ಷರತ್ತುಗಳು:**

1. ಪ್ರಸ್ತಾಪಿಸಿರುವ ರಸ್ತೆ ಪರಿಚಲನೆಯು ಹಾಲಿ ನಗರೀಕರಣ ವ್ಯಾಪ್ತಿಯೊಳಗೆ ಇರುವ ಹಾಲಿ ಹಾಗೂ ಪ್ರಸ್ತಾಪಿತ ರಸ್ತೆಗಳೊಂದಿಗೆ ಜೋಡಣೆಯಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.
2. ಕೃಷಿ ವಲಯದಲ್ಲಿ ಪ್ರಸ್ತಾಪಿಸಲಾದ ರಸ್ತೆ ಪರಿಚಲನೆಯು ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿ ಹೊಂದಿಕೊಂಡಂತೆ ಸುತ್ತಲೂ ಇರುವ ಯೋಜನಾ ಪ್ರಾಧಿಕಾರಗಳ ವ್ಯಾಪ್ತಿಯಲ್ಲಿ ಪ್ರಸ್ತಾಪಿಸಿರುವ ರಸ್ತೆ ಜಾಲಗಳೊಂದಿಗೆ ಹೊಂದಾಣಿಕೆಯಾಗುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.
3. ಸದರಿ ಪ್ರಸ್ತಾವನೆಗೆ ಕೆ.ಟಿ.ಸಿ.ಪಿ ಕಾಯ್ದೆ 1961 ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆ ಪಡೆದು ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಅಭಿವೃದ್ಧಿಗಳಿಗೆ ಅನುಮತಿಸುವಾಗ ಪ್ರಸ್ತಾಪಿತ ರಸ್ತೆ ಜಾಲವನ್ನು ಅಳವಡಿಸಿಕೊಂಡು ಅನುಮೋದನೆಗಳನ್ನು ನೀಡತಕ್ಕದ್ದು.

ಪ್ರಸ್ತಾಪಿತ ರಸ್ತೆ ಪರಿಚಲನಾ ನಕ್ಷೆಗಳಿಗೆ ಅನುಮೋದನೆ ನೀಡುವ ಗುರುತಾಗಿ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ 1961 ರ ಕಲಂ 13(1)(2) ರನ್ವಯ ಕ್ರಮ ಕೈಗೊಂಡು ಪ್ರಸ್ತಾಪಿತ ರಸ್ತೆ ಪರಿಚಲನಾ ಜಾಲದ ನಕ್ಷೆಗಳನ್ನು ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಾಜೇಶ್ ಎಸ್. ಸೂಳಿಕೇರಿ)
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ
(ಬಿ.ಡಿ.ಎ & ಬೆಂ-1)

**PR-329**